# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2305 |
| ಸದಸ್ಯರು ಹೆಸರು | : | ಶ್ರೀ. ಎಸ್ ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು). |
| ಉತ್ತರಿಸಬೇಕಾದ ದಿನಾಂಕ | : | 26.03.2026. |
| ಉತ್ತರಿಸುವ ಸಚಿವರು | : | ಗೃಹ ಸಚಿವರು. |

<table>
<tr><th>ಕ್ರಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>2025-26 ನೇ ಸಾಲಿನಲ್ಲಿ ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ಎಷ್ಟು ಅಪಘಾತ ಪ್ರಕರಣಗಳು ಬೆಳಕಿಗೆ ಬಂದಿವೆ; ಈ ಅಪಘಾತಗಳಿಗೆ ಮೃತಪಟ್ಟವರ ಸಂಖ್ಯೆ ಎಷ್ಟು; ಗಂಭೀರ ಊನಗಳಿಗೆ ಒಳಗಾದವರ ಸಂಖ್ಯೆ ಎಷ್ಟು;</td><td>
<table>
<tr><th>Year</th><th>Fatal Cases</th><th>Non-Fatal Cases</th><th>Total Accidents cases</th><th>Deaths</th><th>Grievous Injured</th><th>Simple Injured</th></tr>
<tr><td>2025</td><td>404</td><td>1100</td><td>1504</td><td>431</td><td>886</td><td>882</td></tr>
<tr><td>2026 (Upto 6th March)</td><td>76</td><td>195</td><td>271</td><td>76</td><td>58</td><td>232</td></tr>
</table>
</td></tr>
<tr><td>ಆ)</td><td>ಕಳೆದ 03 ವರ್ಷಗಳಿಂದ ಈ ಜಿಲ್ಲೆಯಲ್ಲಿ ಅಪಘಾತ ಪ್ರಕರಣಗಳು ಏರಿಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಪಘಾತ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು).</td><td>ಕಳೆದ 03 ವರ್ಷಗಳಲ್ಲಿ ಸಂಭವಿಸಿರುವ ರಸ್ತೆ ಅಪಘಾತಗಳು ಏರಿಕೆಯಾಗಿರುವುದು ಗಮನಕ್ಕೆ ಬಂದಿದೆ. ಇದರೊಂದಿಗೆ, ರಸ್ತೆ ಅಪಘಾತ ಪ್ರಕರಣಗಳನ್ನು ತಡೆಗಟ್ಟಲು ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ:-
<ul>
<li>ರಸ್ತೆ ಅಪಘಾತಗಳು ಹೆಚ್ಚಾಗಿ ಸಂಭವಿಸುವ ಸ್ಥಳಗಳನ್ನು ಗುರುತಿಸಿ ಅಂತಹ ಸ್ಥಳಗಳಲ್ಲಿ ಅವಶ್ಯಕವಿರುವಂತಹ ರಸ್ತೆ ಸುರಕ್ಷತಾ ಪರಿಕರಗಳನ್ನು ಅಳವಡಿಸಿದ್ದು, ಮುಂದಿನ ದಿನಗಳಲ್ಲಿ ನಗರದಾದ್ಯಂತ ಹೆಚ್ಚಿನ ರಸ್ತೆ ಸುರಕ್ಷತಾ ಪರಿಕರಗಳನ್ನು ಅಳವಡಿಸಲು ಕ್ರಿಯಾ ಯೋಜನೆಯನ್ನು ಸಿದ್ದಪಡಿಸಿಕೊಂಡಿರುತ್ತದೆ.</li>
<li>ಶಾಲಾ ಕಾಲೇಜುಗಳು, ಸಾರ್ವಜನಿಕರು ಹೆಚ್ಚಾಗಿ ಸೇರುವಂತಹ ಸ್ಥಳಗಳಲ್ಲಿ ರಸ್ತೆ ಸುರಕ್ಷತೆಯ ಬಗ್ಗೆ ಹಾಗು ಸಂಚಾರ ನಿಯಮಗಳ ಬಗ್ಗೆ ಅರಿವು ಮೂಡಿಸುವಂತಹ ಕಾರ್ಯಕ್ರಮಗಳನ್ನು ಈಗಾಗಲೇ ಕೈಗೊಳ್ಳಲಾಗಿದೆ. ಮುಂದಿನ ದಿನಗಳಲ್ಲಿ ಎಲ್ಲಾ ಸಾರ್ವಜನಿಕರಿಗೂ ಸಹ ರಸ್ತೆ ಸುರಕ್ಷತೆ ಹಾಗೂ ಸಂಚಾರ ನಿಯಮಗಳ ಬಗ್ಗೆ ತಿಳುವಳಿಕೆ ಮತ್ತು ಅರಿವು ಮೂಡಿಸುವಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತದೆ.</li>
<li>ಹೆಚ್ಚು ಸಾರ್ವಜನಿಕರು ಸೇರುವಂತಹ ಸ್ಥಳಗಳಲ್ಲಿ ರಸ್ತೆ ಸುರಕ್ಷತೆಯ ಬಗ್ಗೆ ನಾಟಕ ಹಾಗೂ ಇತ್ಯಾದಿ ಅಣಕು ಪ್ರದರ್ಶನಗಳನ್ನು ಏರ್ಪಡಿಸುವ ಮೂಲಕ ಸಾರ್ವಜನಿಕರಿಗೆ ತಲುಪುವಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ.</li>
<li>ಹೆಲ್ಮೆಟ್ ಧರಿಸದೇ ದ್ವಿಚಕ್ರ ವಾಹನಗಳನ್ನು ಚಾಲನೆ ಮಾಡುವುದು ಮತ್ತು ಮದ್ಯವನ್ನು ಸೇವನೆ ಮಾಡಿ, ಚಾಲನೆ ಮಾಡುವುದು ಅಪರಾಧವೆಂದು ವಾಹನ ಸವಾರರಿಗೆ ಅರಿವು ಕಾರ್ಯಕ್ರಮವನ್ನು ಕೈಗೊಂಡು ನಂತರ ನಿಯಮ ಉಲ್ಲಂಘನೆ ಮಾಡುವವರ ವಿರುದ್ಧ ಮೋಟಾರು ಕಾಯ್ದೆ ಅಡಿಯಲ್ಲಿ ಹೆಚ್ಚಾಗಿ ಐ.ಎಂ.ವಿ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ.</li>
</ul>
</td></tr>
</table>

| | | |
|---|---|---|
| | | • ಬೀಟ್ ಸಿಬ್ಬಂದಿಗಳ ಮೂಲಕ ಗ್ರಾಮಗಳಲ್ಲಿ ಸಂಚಾರ ನಿಯಮಗಳ ಬಗ್ಗೆ ಅರಿವು ಕಾರ್ಯಕ್ರಮಕ್ಕೆ ಒತ್ತು ನೀಡಲಾಗುತ್ತಿದೆ.<br><br>• ವಾಹನದ ಆರ್.ಸಿ, ಇನ್ಶೂರೆನ್ಸ್ ಹಾಗೂ ಇತ್ಯಾದಿ ದಾಖಲಾತಿಗಳನ್ನು ವಾಹನ ಚಾಲನೆ ಮಾಡುವಾಗ ತಮ್ಮ ಬಳಿ ಇಟ್ಟುಕೊಳ್ಳುವ ಬಗ್ಗೆ ಪ್ರಚಾರ ಮಾಡಲಾಗುತ್ತಿದೆ.<br><br>• ಅಪಘಾತಗಳನ್ನು ತಡೆಗಟ್ಟುವ ಸಲುವಾಗಿ ಕಣ್ಣಿಗೆ ಗೋಚರಿಸುವ (Visible Violations) ಸಂಚಾರ ನಿಯಮಗಳಾದ ಸಿಗ್ನಲ್ ಜಂಪ್, ಸೀಟ್ ಬೆಲ್ಟ್ ಇಲ್ಲದ, ಗೂಡ್ಸ್ ವಾಹನಗಳಲ್ಲಿ ಪ್ಯಾಸೆಂಜರ್ ಹಾಗೂ ಕಾರ್ಮಿಕರನ್ನು ಕೂರಿಸಿಕೊಂಡು ಹೋಗುವ ವಾಹನಗಳು, ಮೊಬೈಲ್ ಫೋನ್ ಬಳಕೆ, ಹೆಲ್ಮೆಟ್ ಇಲ್ಲದ, ಮದ್ಯಪಾನ ಮಾಡಿ ವಾಹನ ಚಾಲನೆ ಹಾಗೂ ಇತರೆ ಸಂಚಾರ ನಿಯಮ ಉಲ್ಲಂಘನೆ ಮಾಡುವ ವಾಹನ ಸವಾರರ ಮೇಲೆ ಐ.ಎಂ.ವಿ ಆಕ್ಟ್ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿಕೊಂಡು ಅಪಘಾತ ಪ್ರಕರಣಗಳನ್ನು ಕಡಿಮೆ ಮಾಡಲಾಗುತ್ತಿದೆ.<br><br>• ಮಾನ್ಯ ಸರ್ವೋಚ್ಚ ನ್ಯಾಯಾಲಯದ ರಸ್ತೆ ಸುರಕ್ಷತಾ ಸಮಿತಿಯು ಕಾಲ ಕಾಲಕ್ಕೆ ನೀಡಿರುವ ಸಲಹೆ ಸೂಚನೆಗಳನ್ನು ಸಂಚಾರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವಾಹನ ಚಾಲಕರುಗಳಿಗೆ ಪತ್ರಿ ಹಂತದಲ್ಲಿ ಸಂಚಾರ ನಿಯಮಗಳ ತಿಳುವಳಿಕೆ ಕಾರ್ಯಕ್ರಮವನ್ನು ಹಮ್ಮಿಕೊಂಡು ರಸ್ತೆ ಅಪಘಾತಗಳು ಸಂಭವಿಸದಂತೆ ಅರಿವು ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುತ್ತದೆ.<br><br>• ರಸ್ತೆ ಅಪಘಾತಗಳನ್ನು ತಡೆಗಟ್ಟಲು ರಸ್ತೆಗಳನ್ನು ಲೋಕೋಪಯೋಗಿ ಇಲಾಖೆ ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಇಂಜಿನಿಯರ್ ಹಾಗೂ ಸಾರಿಗೆ ಅಧಿಕಾರಿಯವರಿಂದ ಜಂಟಿ ಸಮೀಕ್ಷೆಯನ್ನು ಮಾಡಿ ವೈಜ್ಞಾನಿಕ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>• ಶಾಲಾ/ಕಾಲೇಜು ವಿದ್ಯಾರ್ಥಿಗಳಿಗೆ ಹಾಗೂ ಲಾರಿ ಚಾಲಕರು ಮತ್ತು ಮಾಲೀಕರ ಸಂಘ, ಖಾಸಗಿ ಬಸ್ಸುಗಳ ಮಾಲೀಕರು, ಟೆಂಪೋಗಳ ಚಾಲಕರು, ಆಟೋರಿಕ್ಷಾ, ಚಾಲಕರು, ಗೂಡ್ಸ್ ವಾಹನಗಳ ಚಾಲಕರು, ಶಾಲಾ ಮಕ್ಕಳನ್ನು ಕರೆದುಕೊಂಡು ಹೋಗುವ ಶಾಲಾ ವಾಹನದ ಮುಖ್ಯಸ್ಥರುಗಳ ಸಭೆಯನ್ನು ಹಮ್ಮಿಕೊಂಡು ತಿಳುವಳಿಕೆಯನ್ನು ನೀಡಿ ರಸ್ತೆ ಅಪಘಾತ ತಡೆಗಟ್ಟಲು ಅರಿವು ಕಾರ್ಯಕ್ರಮ ಮಾಡಲಾಗುತ್ತಿದೆ.<br><br>• ಮುಖ್ಯ ರಸ್ತೆಯಿಂದ ಸರ್ವೀಸ್ ರಸ್ತೆಗೆ ಪ್ರವೇಶಿಸುವ ಸ್ಥಳದಲ್ಲಿ ಸರ್ವೀಸ್ ರಸ್ತೆಯಲ್ಲಿ ವೈಜ್ಞಾನಿಕ ರಸ್ತೆ ಉಬ್ಬುಗಳನ್ನು ಹಾಕಿಸಲು ಲೋಕೋಪಯೋಗಿ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ ಕ್ರಮವಹಿಸಿರುತ್ತದೆ.<br><br>• ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವುದರಿಂದ ಆಗುವಂತಹ ಪರಿಣಾಮಗಳ ಬಗ್ಗೆ, ಮೊಬೈಲ್‌ನಲ್ಲಿ ಮಾತನಾಡಿಕೊಂಡು ವಾಹನ ಚಾಲನೆ ಮಾಡುವುದರಿಂದ ಆಗುವಂತಹ ಪರಿಣಾಮಗಳ ಬಗ್ಗೆ ಹಾಗು ಇನ್ನಿತರೆ ಸಂಚಾರ ನಿಯಮ ಉಲ್ಲಂಘನೆಗಳು ಮಾಡುವುದರಿಂದ ಆಗುವಂತಹ ಪರಿಣಾಮಗಳ ಬಗ್ಗೆ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಮಾರಣಾಂತಿಕ ಅಪಘಾತಗಳನ್ನು ತಡೆಗಟ್ಟಲು ಕ್ರಮ ವಹಿಸಿದೆ. |

| | | |
|---|---|---|
| | | • ಮಾರಣಾಂತಿಕ ರಸ್ತೆ ಅಪಘಾತಗಳನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಪ್ರಮುಖ ವೃತ್ತ ಹಾಗೂ ರಸ್ತೆಗಳಲ್ಲಿ ಜಿಗ್-ಜಾಗ್ ಬ್ಯಾರಿಕೇಡ್ ವ್ಯವಸ್ಥೆ ಮಾಡಿಕೊಂಡು ವಾಹನಗಳು ನಿಧಾನವಾಗಿ ಸಾಗುವಂತೆ ನೋಡಿಕೊಳ್ಳಲಾಗುತ್ತಿದೆ.<br>• ಅತೀ ವೇಗವಾಗಿ ಚಾಲನೆ ಮಾಡುವ ವಾಹನ ಸವಾರರಿಗೆ ಮೋಟಾರ ವಾಹನ ಕಾಯ್ದೆ ಅಡಿಯಲ್ಲಿ ಚಾಲಕನ ಚಾಲನಾ ಪರವಾನಗಿಯನ್ನು ಅಮಾನತ್ತುಪಡಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ.<br>• ಒಂದೇ ಕಡೆ ಅತಿ ಹೆಚ್ಚಾಗಿ ಸಂಭವಿಸುವ ಮಾರಣಾಂತಿಕ ರಸ್ತೆ ಅಪಘಾತಗಳ ಸ್ಥಳಗಳನ್ನು ಕಪ್ಪು ಸ್ಥಳ (Black Spot) ಅಂತ ಗುರುತಿಸಿ ಸಾರಿಗೆ/ಲೋಕೋಪಯೋಗಿ ಇಲಾಖೆಯವರೊಂದಿಗೆ ಜಂಟಿ ತನಿಖೆ ಕೈಗೊಂಡು, ರಸ್ತೆ ಅಪಘಾತಗಳ ನಿಯಂತ್ರಣ ಕುರಿತು ಕ್ರಮವಹಿಸಲಾಗಿದೆ.<br>• ನಗರ ಪ್ರದೇಶ ವ್ಯಾಪ್ತಿಯಲ್ಲಿಯ ತಗ್ಗು ಗುಂಡಿಗಳನ್ನು ಸ್ಥಳೀಯ ಸಂಸ್ಥೆಯವರುಗಳಿಂದ ಸರಿಪಡಿಸಲು ಕ್ರಮ ಕೈಗೊಂಡಿರುತ್ತದೆ.<br>• ಅಪ್ರಾಪ್ತ ವಯಸ್ಸಿನ ಮಕ್ಕಳು ವಾಹನ ಚಾಲನೆ ಮಾಡುವವರ ವಿರುದ್ಧ ವಿಶೇಷ ಕಾರ್ಯಚರಣೆಯನ್ನು ಕೈಕೊಂಡಿರುತ್ತದೆ.<br>• ಎನ್.ಹೆಚ್-275 ಹೆದ್ದಾರಿಯಲ್ಲಿ ಅಪಘಾತಗಳನ್ನು ತಡೆಗಟ್ಟುವ ಸಲುವಾಗಿ ಸಂಚಾರ ನಿಯಮಗಳ ಸೂಚನಾ ಫಲಕಗಳನ್ನು ಅಳವಡಿಸಲಾಗಿದೆ.<br>• ಪಾದಚಾರಿ ಮಾರ್ಗಗಳನ್ನು ಅತಿಕ್ರಮಿಸುವವರ ವಿರುದ್ಧ ದಂಡವನ್ನು ವಿಧಿಸುತ್ತಿದ್ದು ಹಾಗೂ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ.<br>• ಪ್ರಮುಖ ವೃತ್ತಗಳಲ್ಲಿ ಜೀಬ್ರಾ ಕ್ರಾಸಿಂಗ್ ಲೈನ್ ಹಾಕಿಕೊಂಡು ಪಾದಾಚಾರಿಗಳಿಗೆ ಸಂಚರಿಸಲು ಅನುಕೂಲವಾಗುವಂತೆ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>• ಪಾದಚಾರಿಗಳು, ಹಿರಿಯ ನಾಗರೀಕರು, ಮಹಿಳೆಯರು, ಮಕ್ಕಳು ವಿದ್ಯಾರ್ಥಿಗಳು, ವಯೋವೃದ್ಧರಿಗೆ ಜೀಬ್ರಾ ಕ್ರಾಸಿಂಗ್ ಇರುವ ಸ್ಥಳಗಳಲ್ಲಿ ಸಂಚರಿಸುವಂತೆ ಪಬ್ಲಿಕ್ ಅನೌನ್ಸ್‌ಮೆಂಟ್ ಸಿಸ್ಟಮ್‌ಗಳ ಮೂಲಕ ನಿರ್ದೇಶನಗಳನ್ನು ನೀಡಲಾಗುತ್ತಿದೆ.<br>• ಪ್ರಮುಖ ಸ್ಥಳಗಳಾದ ಗಾರ್ಮೆಂಟ್ಸ್, ಆಸ್ಪತ್ರೆ, ಶಾಲಾ-ಕಾಲೇಜು, ಫ್ಯಾಕ್ಟರಿ ಹಾಗೂ ಹೆಚ್ಚಿನ ಜನರು ಸೇರುವ ಸ್ಥಳಗಳಲ್ಲಿ ಸಂಚಾರ ನಿಯಮಗಳ ಕುರಿತು ಅರಿವು ಮೂಡಿಸಲಾಗುತ್ತಿದೆ. ಬೆಂಗಳೂರು ದಕ್ಷಿಣ ಜಿಲ್ಲಾ ವ್ಯಾಪ್ತಿಯ ರಾಷ್ಟ್ರೀಯ ಹೆದ್ದಾರಿ ಮತ್ತು ರಾಜ್ಯ ಹೆದ್ದಾರಿ ರಸ್ತೆಗಳಲ್ಲಿ ಶಿಸ್ತು ಪಥಚಾಲನೆಯ ನಿಯಮಗಳನ್ನು ಉಲ್ಲಂಘಿಸಿದ ವಾಹನ ಚಾಲಕರ ವಿರುದ್ಧ ಮೋಟಾರು ವಾಹನ ಕಾಯ್ದೆ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ.<br>• ಬೆಂಗಳೂರು ದಕ್ಷಿಣ ಜಿಲ್ಲಾ ವ್ಯಾಪ್ತಿಯ ರಾಷ್ಟ್ರೀಯ ಹೆದ್ದಾರಿ ಮತ್ತು ರಾಜ್ಯ ಹೆದ್ದಾರಿ ರಸ್ತೆಗಳಲ್ಲಿ ಶಿಸ್ತು ಪಥಚಲನೆಯ ನಿಯಮಗಳನ್ನು ಉಲ್ಲಂಘಿಸಿದ ವಾಹನ ಚಾಲಕರ ವಿರುದ್ಧ ಮೋಟಾರು ವಾಹನ ಕಾಯ್ದೆ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. |

| | | |
|---|---|---|
| | | • ರಸ್ತೆಗಳಲ್ಲಿ ಲೇನ್ ಮಾರ್ಕ್‌ಗಳು ಇಲ್ಲದೆ ಇರುವುದು ಅಥವಾ ಅಳಸಿ ಹೋಗಿ ಕಣ್ಣಿಗೆ ಕಾಣದೆ ಇರುವ ಸ್ಥಳಗಳನ್ನು ಗುರುತಿಸಿ ಅಂತಹ ಸ್ಥಳಗಳಲ್ಲಿ ಬಿಳಿ ಬಣ್ಣದಿಂದ ಲೈನ್ ಮಾರ್ಕ್ ಮಾಡಿಸಲು ಕ್ರಮ ವಹಿಸಿರುತ್ತದೆ.<br>• ಕೆ.ಎಸ್.ಆರ್.ಟಿ.ಸಿ. ಬಸ್ ಚಾಲಕರುಗಳಿಗೆ, ಭಾರೀ ಗಾತ್ರದ ವಾಹನಗಳ ಚಾಲಕರುಗಳಿಗೆ ಶಿಸ್ತು ಪಥಚಲನೆಯ ನಿಯಮಗಳನ್ನು ಕಡ್ಡಾಯವಾಗಿ ಅನುಸರಿಸುವ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಕೈಗೊಂಡಿದೆ.<br>• ಕೈಗಾರಿಕಾ ಪ್ರದೇಶಗಳಲ್ಲಿ, ಲಾರಿ, ಸ್ಟ್ಯಾಂಡ್ ಗಳಲ್ಲಿ ಲೇನ್ ಡಿಸಿಪ್ಲೆನ್ ಬಗ್ಗೆ ಅರಿವು ಮೂಡಿಸಲಾಗಿದೆ.<br>• ಸಿ.ಸಿ. ಕ್ಯಾಮರಾಗಳ ಸಹಾಯದಿಂದ ಶಿಸ್ತು ಪಥಚಲನೆ ಉಲ್ಲಂಘಿಸುವವರ ವಿರುದ್ಧ ಕ್ರಮಕೈಗೊಳ್ಳಲಾಗುತ್ತಿದೆ.<br>• ಹೈವೇ ಪೆಟ್ರೋಲಿಂಗ್ ವಾಹನದ ಸಹಾಯದಿಂದ ಓವರ್ ಸ್ಪೀಡ್ ಇರುವ ವಾಹನಗಳ ಮೇಲೆ ಮತ್ತು ಶಿಸ್ತು ಪಥಚಾಲನೆಯನ್ನು ಪಾಲಿಸದ ವಾಹನಗಳ ಮೇಲೆ ಹಾಗೂ ಇತರೆ ಸಂಚಾರ ನಿಯಮ ಉಲ್ಲಂಘನೆ ಮಾಡುವ ವಾಹನ ಸವಾರರ ಮೇಲೆ ಕ್ರಮ ಜರುಗಿಸಲಾಗುತ್ತಿದೆ.<br>• ನಗರದಲ್ಲಿ ಕಿರಿದಾಗಿರುವ ರಸ್ತೆಗಳನ್ನು ಗುರುತಿಸಿ ಅಂತಹ ರಸ್ತೆಗಳಲ್ಲಿ ಏಕಮುಖ ಸಂಚಾರಕ್ಕೆ ಅನುಮೋದನೆಯನ್ನು ಪಡೆದುಕೊಂಡು ಅದನ್ನು ಕಾರ್ಯರೂಪಕ್ಕೆ ತರುವ ಮೂಲಕ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಗಿದೆ.<br>• ವಾಹನ ಚಾಲಕರು ಅತಿವೇಗವಾದ ಚಾಲನೆಯೇ ರಸ್ತೆ ಅಪಘಾತಗಳು ಸಂಭವಿಸಲು ಮುಖ್ಯ ಕಾರಣವಾಗಿದ್ದು, ಅಂತಹ ಚಾಲಕರುಗಳ ವಿರುದ್ಧ ಮೋಟಾರು ವಾಹನ ಕಾಯ್ದೆ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿ, ಕಡ್ಡಾಯವಾಗಿ ಚಾಲನಾ ಪರವಾನಗಿಯನ್ನು ಅಮಾನತ್ತು / ರದ್ದುಗೊಳಿಸಲು ಕ್ರಮ ಕೈಗೊಳ್ಳಲು ಎಲ್ಲಾ ಅಧೀನ ಅಧಿಕಾರಿಗಳಿಗೆ ಸೂಚಿಸಿದೆ. |

ಹೆಚ್‌ಡಿ 180 ಎಸ್‌ಎಸ್‌ಟಿ 2026

**(ಡಾ: ಜಿ.ಪರಮೇಶ್ವರ)**
ಗೃಹ ಸಚಿವರು.